## ಕರ್ನಾಟಕ ಸರ್ಕಾರದ ನಡುವಳಿಗಳು

**ವಿಷಯ :** ಲೋಕೋಪಯೋಗಿ ಇಲಾಖೆ ಹಾಗೂ ಇತರೆ ಇಲಾಖೆಗಳ ವಿವಿಧ ವೃಂದಗಳ ಅಧಿಕಾರಿ / ನೌಕರರುಗಳನ್ನು ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ವ್ಯಾಪ್ತಿಯಲ್ಲಿನ ಇಲಾಖೆಗಳಲ್ಲಿ ಖಾಯಂ ಆಗಿ ವಿಲೀನಗೊಳಿಸುವ ಬಗ್ಗೆ - ತಂತ್ರಾಂಶ ಒದಗಿಸುವ ಸಂಸ್ಥೆ M/s. Idea sparkz ಸಂಸ್ಥೆಗೆ ಸೇವಾ ಶುಲ್ಕ ಪಾವತಿಸುವ ಬಗ್ಗೆ.

**ಓದಲಾಗಿದೆ :** ಮಾನ್ಯ ಉಪ ಮುಖ್ಯ ಮಂತ್ರಿಗಳು ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಗಳು ದಿನಾಂಕ: 17-12-2019.

**ಪ್ರಸ್ತಾವನೆ :**

ಲೋಕೋಪಯೋಗಿ ಇಲಾಖೆಯಲ್ಲಿ ನೇಮಕಾತಿ ಹೊಂದಿರುವ ವಿವಿಧ ವೃಂದಗಳ ಅಧಿಕಾರಿ/ನೌಕರರುಗಳನ್ನು ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಿಗೆ ಹಂಚಿಕೆ ಮಾಡುವ ಕುರಿತು ಮಾನ್ಯ ಉಪ ಮುಖ್ಯ ಮಂತ್ರಿಗಳು ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ವಿವಿಧ ಇಲಾಖೆಗಳ ಮುಖ್ಯಸ್ಥರ ಸಭೆ ನಡೆದಿದ್ದು, ಸದರಿ ಸಭೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಶಾಶ್ವತವಾಗಿ ವಿಲೀನಗೊಳ್ಳಲು ಇಚ್ಛಿಸುವ ಕುರಿತು ಅಧಿಕಾರಿ/ನೌಕರರಿಂದ ಒಬ್ಬರಿಗೆ ಒಂದೇ ಇಲಾಖೆಯ ಆಯ್ಕೆಯ ಅಭಿಮತ ಪಡೆಯುವ ದಿಸೆಯಲ್ಲಿ ಸಂಬಂಧಪಟ್ಟ ಇಲಾಖೆಗಳು ಕ್ರಮ ಕೈಗೊಳ್ಳಬೇಕೆಂದು ತೀರ್ಮಾನಿಸಲಾಗಿರುತ್ತದೆ.

ಅದರನ್ವಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ (1) ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆ (2) ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗಳಲ್ಲಿ ಮಂಜೂರಾಗಿರುವ ಖಾಲಿ ಹುದ್ದೆಗಳ ಎದುರು ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ ಹಾಗೂ ಇತರೆ ಇಲಾಖೆಗಳ ಅಧಿಕಾರಿ/ ನೌಕರರುಗಳನ್ನು ಶಾಶ್ವತವಾಗಿ ವಿಲೀನಗೊಳಿಸಿಕೊಳ್ಳುವ ಸಲುವಾಗಿ ಅಭಿಮತಗಳನ್ನು ಕರೆಯುವ ಸಂಬಂಧದ ಪ್ರಕ್ರಿಯೆಗೆ ಅನುಕೂಲವಾಗುವಂತೆ ಸೂಕ್ತ ತಂತ್ರಾಂಶವನ್ನು M/s. Idea sparkz, ಬೆಂಗಳೂರು ಸಂಸ್ಥೆಯಿಂದ ಪಡೆಯಲು ತೀರ್ಮಾನಿಸಲಾಗಿದೆ. ಈ ಸಂಬಂಧ ಸದರಿ ಸಂಸ್ಥೆಯಿಂದ ದಿನಾಂಕ:10-03-2020ರಂದು ಸೇವಾ ಶುಲ್ಕದ ಕುರಿತು Invoice ಪಡೆಯಲಾಗಿದ್ದು, ಈ ಸಂಬಂಧದ ಪ್ರಕ್ರಿಯೆಗೆ ಅವಶ್ಯವಿರುವ ತಂತ್ರಾಂಶ ಮತ್ತು ಸಿಬ್ಬಂದಿಯ ಸಹಾಯ ನೀಡಲು ರೂ.5,60,500/-ಗಳ ಶುಲ್ಕ ಪಾವತಿಸಲು ಕೋರಿಕೆ ಸಲ್ಲಿಸಿರುತ್ತಾರೆ. ಸದರಿಯವರ ಕೋರಿಕೆಯನ್ನು ಪರಿಗಣಿಸಿ ಶುಲ್ಕ ಪಾವತಿಸುವ ಮೂಲಕ ತಂತ್ರಾಂಶ/ಸಿಬ್ಬಂದಿಯ ಸೇವೆ ಪಡೆಯಲು ತೀರ್ಮಾನಿಸಲಾಗಿದೆ. ಅದರನ್ವಯ ಈ ಕೆಳಕಂಡ ಆದೇಶ.

### ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 62 ಜಿಪಅ 2020, ಬೆಂಗಳೂರು, ದಿನಾಂಕ 06.05.2020

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನುಸಾರ ಸರ್ಕಾರವು ಲೋಕೋಪಯೋಗಿ ಇಲಾಖೆ , ಜಲಸಂಪನ್ಮೂಲ ಇಲಾಖೆ ಹಾಗೂ ಇತರೆ ಇಲಾಖೆಗಳ ಅಧಿಕಾರಿ/ನೌಕರರುಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ (1) ಪಂಚಾಯತ್ ರಾಜ್ ಇಂಜಿನೀಯರಿಂಗ್ ಇಲಾಖೆ (2) ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗಳಲ್ಲಿ ಮಂಜೂರಾಗಿರುವ ಖಾಲಿ

ಹುದ್ದೆಗಳ ಎದುರು ಶಾಶ್ವತವಾಗಿ ವಿಲೀನಗೊಳಿಸಿಕೊಳ್ಳುವ ಸಲುವಾಗಿ ಅವಶ್ಯವಿರುವ ತಂತ್ರಾಂಶ ಮತ್ತು ಸಿಬ್ಬಂದಿ ಸೇವೆಯನ್ನು ನೀಡಲು M/s. Idea sparkz, ಬೆಂಗಳೂರು ಇವರಿಗೆ ರೂ.5,60,500/- (ಐದು ಲಕ್ಷ ಅರವತ್ತು ಸಾವಿರದ ಐದುನೂರು ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಲು ಸರ್ಕಾರವು ಅನುಮೋದನೆಯನ್ನು ನೀಡಿದೆ. ಈ ಮೊತ್ತವನ್ನು ಲೆಕ್ಕಶೀರ್ಷಿಕೆ 2515-00-001-0-24ರಡಿ ಪಾವತಿಸಲು ಅನುಮತಿಸಲಾಗಿದೆ.

ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯು ಅಧಿಸೂಚನೆ ಸಂಖ್ಯೆ: ಆಇ 214 ವೆಚ್ಚ-12/2020 ದಿನಾಂಕ:30-03-2020ರಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ಅಧಿನಿಯಮ 1999ರ ಕಲಂ 4 (ಜಿ)ರಡಿಯಲ್ಲಿ ವಿನಾಯತಿಯನ್ನು ನೀಡಲಾಗಿರುತ್ತದೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

06/05/2020

(ಎಸ್. ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು , ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. M/s. Idea sparkz, ಸಂಸ್ಥೆ, ನಂ.65/ಎ, 6ನೇ ಅಡ್ಡರಸ್ತೆ, ಎಸ್ಕಾರ್ಡ್ಸ್ ಇಂಜಿನೀಯರ್ಸ್ ಲೇಔಟ್, ಯಲಹಂಕ, ಬೆಂಗಳೂರು – 560 064.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ), ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
6. ಶಾಖಾ ರಕ್ಷ ಕಡತ : ಹೆಚ್ಚುವರಿ ಪ್ರತಿ.